ಪಡೆಯಬಹುದಾಗಿದೆ.

ಶ್ರೀ ಸಿದ್ದರಾಮಯ್ಯ: ಮಾನ್ಯ ಅಧ್ಯಕ್ಷರೇ, ಇದಕ್ಕೆ ಸಂಬಂಧಪಟ್ಟಂತೆ ಇವೊತ್ತೇ ಮಾಹಿತಿಯನ್ನು ತರಿಸಿಕೊಡುತ್ತೇನೆ.

ಶ್ರೀ ಮಂಜುನಾಥ್ ಸಿ.ಕುನ್ನೂರ್: ಮಾನ್ಯ ಅಧ್ಯಕ್ಷರೇ, ನಾನು ಮಾಹಿತಿಯನ್ನು ಕೇಳುತ್ತಿಲ್ಲ.

ಅಧ್ಯಕ್ಷರು: ನಾನು ನಿಮ್ಮ ಸಮಸ್ಯೆ ಏನೆಂಬುದನ್ನು ಹೇಳುತ್ತೇನೆ, ನೀವು ಕುಳಿತುಕೊಳ್ಳಿ, ಮಂಜುನಾಥ್‌ರವರು ಸವಣೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದರಿಂದ ತಕ್ಷಣಕ್ಕೆ 10 ಲಕ್ಷ ರೂಪಾಯಿಗಳನ್ನು ಅಲ್ಲಿಗೆ ಬಿಡುಗಡೆ ಮಾಡಿ ಎಂದು ಕೇಳುತ್ತಿದ್ದಾರೆ.

ಶ್ರೀ ಸಿದ್ದರಾಮಯ್ಯ: ಮಾನ್ಯ ಅಧ್ಯಕ್ಷರೇ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಇರತಕ್ಕಂಥ ಏರ್ಪಾಡನ್ನು ಮಾಡುತ್ತೇನೆ.

(6) ಚಿಂಚೋಳಿಯಲ್ಲಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದು.

ಶ್ರೀ ವೈಜನಾಥ್ ಪಾಟೀಲ್ (ಚಿಂಚೋಳಿ): ಮಾನ್ಯ ಅಧ್ಯಕ್ಷರೇ, ಈ ರೈತರುಗಳು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಬಗ್ಗೆ ಈ ಸದನದಲ್ಲಿ ಬಹಳಷ್ಟು ಸಲ ಚರ್ಚೆಗೆ ಬಂದಿದೆ. ಅಂಥ ಒಂದು ಘಟನೆ ಮೊನ್ನೆ ಚಿಂಚೋಳಿಯಲ್ಲಿ ಆಗಿದ್ದು ಪತ್ರಿಕೆಗಳಲ್ಲಿಯೂ ಕೂಡ ಅದು ಬಂದಿದೆ. ಸರ್ಕಾರದವರು ಸದನ ಸಮಿತಿಯನ್ನು ರಚಿಸಿದ್ದಾರೆ. ಈ ಜಂಟೀ ಸದನ ಸಮಿತಿ ಭೇಟಿ ಕೊಟ್ಟು ಹೋಗಿ ಬಂದಿದ್ದರೂ ಕೂಡ ಇಲ್ಲಿಯವರೆವಿಗೆ ರಿಪೋರ್ಟ್‌ನ್ನು ಕೊಟ್ಟಿಲ್ಲ. ಆದರೆ ಆ ವರದಿ ಬಂದಮೇಲೆ ಏನು ಕ್ರಮ ಜರುಗಿಸುತ್ತಾರೋ ನೋಡೋಣ. ಇದರ ಬಗ್ಗೆ ಕಂದಾಯ ಮಂತ್ರಿಗಳು ಉತ್ತರ ಕೊಡಬೇಕು.

ಶ್ರೀ ಬಿ.ಸೋಮಶೇಖರ್ (ಕಂದಾಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, ನಾವು ಈಗಾಗಲೇ ಜಂಟೀ ಸದನ ಸಮಿತಿಯನ್ನು ರಚಿಸಿದ್ದೇವೆ. ಅವರಿಗೆ ಆದಷ್ಟು ಬೇಗ ವರದಿಯನ್ನು ಕೊಡಬೇಕೆಂದು ತಿಳಿಸಿದ್ದ ಕಾರಣ ಈಗ ವರದಿಯನ್ನು ಕೊಟ್ಟಿರಬಹುದು ಎಂದು ಕಾಣಿಸುತ್ತದೆ. ಆ ವರದಿ ಬಂದ ತಕ್ಷಣ ಅದನ್ನು ಪರಿಶೀಲನೆ ಮಾಡಿ ಸರ್ಕಾರ ಏನು ಕ್ರಮವನ್ನು ತೆಗೆದುಕೊಳ್ಳಬೇಕೋ ಅದನ್ನು ತೆಗೆದುಕೊಳ್ಳುತ್ತೇವೆ.

(7) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆ ಕಾರ್ಯಕ್ರಮ

+ ಶ್ರೀ ಎ.ರಾಮದಾಸ್: ಮಾನ್ಯ ಅಧ್ಯಕ್ಷರೇ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ದಿನಾಂಕ 26ನೇ ತಾರೀಖು ಭಾನುವಾರ ನಿವೇಶನಗಳ ಹಂಚಿಕೆ ಕಾರ್ಯಕ್ರಮವನ್ನು ನಿಶ್ಚಯ ಮಾಡಿದ್ದಾರೆ. ಈಗಾಗಲೇ ಈ ಹಿಂದೆಯೇ ಇದರ ಬಗ್ಗೆ